ಮಾನ್ಯ ಕೇಂದ್ರ ಸಚಿವರು ಹಾಗೂ ಇತರೆ ಗಣ್ಯರ ಉಪಸ್ಥಿತಿಯಲ್ಲಿ "ಶ್ರೀ ರಾಮ ಮಂದಿರ ನಿರ್ಮಾಣ"ಕಾರ್ಯಕ್ಕೆ 5 ಲಕ್ಷ ರೂ. ಚೆಕ್ ಸಮರ್ಪಣೆ:

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘವು ಪಾಲಿಕೆ ಅಧಿಕಾರಿ ಮತ್ತು ನೌಕರರಿಂದ ಶ್ರೀ ರಾಮಜನ್ಮಭೂಮಿ ಅಯ್ಯೋಧ್ಯೆಯಲ್ಲಿ ಶ್ರೀ ರಾಮ ಮಂದಿರ ನಿಮಾರ್ಣಕ್ಕೆ ಸಂಗ್ರಹಿಸಿದ 5.00ಲಕ್ಷ ರೂ. ಮೊತ್ತವನ್ನು ಇಂದು ಪಾಲಿಕೆ ಕೇಂದ್ರ ಕಛೇರಿಯ ಅನೆಕ್ಸ್ ಕಟ್ಟಡದಲ್ಲಿರುವ ಸಂಘದ ಮೊದಲನೆ ಮಹಡಿಯ "ವಿವೇಕಾನಂದ ಸಭಾಂಗಣ"ದಲ್ಲಿ ಮಾನ್ಯ ಕೇಂದ್ರ ಸಚಿವರಾದ ಶ್ರೀ ಡಿ.ವಿ.ಸದಾನಂದ ಗೌಡ ರವರಿಗೆ ಮಾನ್ಯ ಆಡಳಿತಗಾರರು ಶ್ರೀ ಗೌರವ್ ಗುಪ್ತಾ ಮತ್ತು ಮಾನ್ಯ ಆಯುಕ್ತರು ಶ್ರೀ ಎನ್.ಮಂಜುನಾಥ್ ಪ್ರಸಾದ್ ರವರ ಮುಖಾಂತರ ಸಮರ್ಪಿಸಲಾಯಿತು. ಈ ವೇಳೆ ಮಾನ್ಯ ಮಾಜಿ ಉಪಮಹಾಪೌರರು ಶ್ರೀ ಹರೀಶ್, ಬೆಂಗಳೂರು ದಕ್ಷಿಣ ಜಿಲ್ಲಾ ಬಿಜೆಪಿ ಘಟಕ ಅಧ್ಯಕ್ಷರು ಶ್ರೀ ಎನ್.ಆರ್.ರಮೇಶ್, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ ಅಧ್ಯಕ್ಷರು ಅಮೃತ್ ರಾಜ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ರಾಮಜನ್ಮಭೂಮಿ ಅಯ್ಯೋಧ್ಯೆಯಲ್ಲಿ ಶ್ರೀ ರಾಮ ಮಂದಿರ ನಿಮಾರ್ಣಕ್ಕೆ ಪಾಲಿಕೆಯ ನೌಕರರ ಕ್ಷೇಮಾಭಿವೃದ್ಧಿ ಸಂಘವು ಅಧಿಕಾರಿ ನೌಕರರು ಶ್ರಮದಿಂದ ದುಡಿದ ಹಣವನ್ನು ಸಂಗ್ರಹಿಸಿ ರಾಮಮಂದಿರ ನಿರ್ಮಾಣಕ್ಕೆ ಕೊಡುಗೆ ನೀಡುತ್ತಿರುವುದು ಸಂತಸದ ವಿಷಯ ಎಂದು ಕೇಂದ್ರ ಸಚಿವರು ತಿಳಿಸಿದರು.

ರಾಮ ಮಂದಿರ ನಿರ್ಮಾಣದ ವಿಚಾರವಾಗಿ ಸುಪ್ರೀಂಕೋರ್ಟ್ ನಿಂದ ಬಂದ ತೀರ್ಮಾನದ ನಂತರ ಕೇಂದ್ರ ಸರ್ಕಾರವು ಸರ್ಕಾರದ ಹಣ ಬಳಸದೆ ದೇಶದಾದ್ಯಂತ ಜನರು ನೀಡುತ್ತಿರುವ ಕಾಣಿಕೆ ಮೂಲಕ ರಾಮ ಮಂದಿರ ನಿರ್ಮಾಣ ಮಾಡಲಾಗುತ್ತಿದೆ. ಎಲ್ಲಾ ಶ್ರಮಜೀವಿಗಳು ದುಡಿದ ಹಣದಲ್ಲಿ ಕೊಡುಗೆ ನೀಡುತ್ತಿರುವುದು ದೊಡ್ಡ ವಿಷಯವಾಗಿದೆ. ದೇಶದ ಸಂಸ್ಕೃತಿ ಪರಂಪರೆಗಳಿಗೆ ಹೊಸ ಆಯಾಮವನ್ನು ಕೊಡುವ ಕೆಲಸ ಇದಾಗಿದೆ. ರಾಮಮಂದಿರ ನಿರ್ಮಾಣದ ಜೊತೆ ಜೊತೆಗೆ ರಾಮನ ಆದರ್ಶಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು ಎಂದರು.

ಹೆಚ್ಚಿನ ಮಾಹಿತಿಗಾಗಿ ಕೇಂದ್ರ ಸಚಿವರು ಮಾತನಾಡಿರುವ ಆಡಿಯೋ ಬೈಟ್ ಅನ್ನು ಲಗತ್ತಿಸಿದೆ.